# ಕರ್ನಾಟಕ ವಿಧಾನಸಭೆ

()

## ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಪಟ್ಟಿ

----

[Minister for Food and Civil Supplies and Consumer Affairs Department. & Minority Welfare and Wakf Department. - Minister for Health & Family Welfare Department excluding Medical Education - Minister for Forest, Ecology & Environmental - Higher Education, IT & BT, Science and Technology. and Minister for Primary and Secondary Education ].

ಒಟ್ಟು ಪ್ರಶ್ನೆಗಳು - 12

----

### WHEN THE 10 THE MARKS CARD WILL BE ISSUED

*13 **Mr. RIZWAN ARSHAD (Shivajinagar (162)):**

ಮಾನ್ಯ **Minister for Primary and Secondary Education** ದಿನಾಂಕ Kindly tell us the date of issuing the 10th marks card

----

### ಸಿಬ್ಬಂದಿ ಕೊರತೆ

*14 **Mr. RIZWAN ARSHAD (Shivajinagar (162)):**

ಮಾನ್ಯ **Minister for Health & Family Welfare Department excluding Medical Education**ದಿನಾಂಕ ಅ) ಕುಮಟಾ ತಾಲ್ಲೂಕಿನ ಮೂರುರು ಕಲ್ಲಬ್ಬೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಹಾಗೂ ಔಷಧಿ ಪೂರೈಕೆಯಲ್ಲಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

----

### ಶರಾವತಿ ಅಭಯಾರಣ್ಯ

*15 **Mr. RIZWAN ARSHAD (Shivajinagar (162)):**

ಮಾನ್ಯ Minister for Forest, Ecology & Environmental ದಿನಾಂಕ ಅ) ಶರಾವತಿ ಅಭಯಾರಣ್ಯ ಅಧಿಸೂಚನೆಯಲ್ಲಿ 434 ಚ.ಕಿ.ಮೀ ಘೋಷಣೆಯಾದ ಪ್ರದೇಶದಲ್ಲಿ 200 ಚ.ಕಿ.ಮೀ ರೈತರ ಸಾಗುವಳಿ ಜಮೀನು, ಕಂದಾಯ ಇಲಾಖೆಯ ಜಮೀನು ಹಾಗೂ ಸರ್ಕಾರಿ ಕಟ್ಟಡಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಈ ಅಧಿಸೂಚನೆಯಿಂದಾಗಿ ಆ ಭಾಗದ ನಿವಾಸಿಗಳಿಗೆ ವಿದ್ಯುತ್ ಸಂಪರ್ಕ, ರಸ್ತೆ ನಿರ್ಮಾಣ, ಕುಡಿಯುವ ನೀರು ಮತ್ತು ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇ) ಸದರಿ 200 ಚ.ಕಿ.ಮೀ ಪ್ರದೇಶವನ್ನು ಅಧಿಸೂಚನೆಯಿಂದ ಕೈಬಿಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಈ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು? (ಪೂರ್ಣ ವಿವರ ಒದಗಿಸುವುದು)

----

**ಅಂತಿಮ ಜೇಷ್ಠತಾ ಪಟ್ಟಿಯ ಪ್ರಕಟಣೆ .**

*16 **Mr. RIZWAN ARSHAD (Shivajinagar (162)):**

ಮಾನ್ಯ **Higher Education, IT & BT, Science and Technology.** ದಿನಾಂಕ ಅ) ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿನ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರ (ಗ್ರೇಡ್1 ಮತ್ತು ಗ್ರೇಡ್2) ಅಂತಿಮ ಜೇಷ್ಠತಾ ಪಟ್ಟಿಯನ್ನು ಬಿ.ಕೆ. ಪವಿತ್ರ ಪ್ರಕರಣದನ್ವಯ ಪರಿಷ್ಕರಣೆಗೊಳಿಸಿ ಇಲ್ಲಿಯವರೆವಿಗೂ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಜೇಷ್ಠತಾ ಪಟ್ಟಿಯನ್ನು ಪ್ರಕಟಿಸದೇ ಇರುವುದರಿಂದ ಕಳೆದ 34 ವರ್ಷಗಳಿಂದ ಅಧಿಕಾರಿಗಳಿಗೆ/ಪ್ರಾಂಶುಪಾಲರುಗಳಿಗೆ ವಾರ್ಷಿಕ ವೇತನ ಬಡ್ತಿ ದೊರೆಯದೆ ತುಂಬಾ ತೊಂದರೆಯಾಗಿದ್ದು, ಈ ಬಗ್ಗೆ ಕೈಗೊಂಡ ಕ್ರಮವೇನು; ಇ) ಅಂತಿಮ ಜೇಷ್ಠತಾ ಪಟ್ಟಿಯನ್ನು ಯಾವ ಕಾಲಮಿತಿಯೊಳಗೆ ಪ್ರಕಟಿಸಲಾಗುವುದು; ಈ) ಪ್ರಸ್ತುತ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ? (ಸಂಪೂರ್ಣ ವಿವರ ನಿಡುವುದು)

----

**ತಾಯಿ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಾಣ**

*17 **Mr. RIZWAN ARSHAD (Shivajinagar (162)):**

ಮಾನ್ಯ **Minister for Health & Family Welfare Department excluding Medical Education**ದಿನಾಂಕ ಅ) ದೇವರ ಹಿಪ್ಪರಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹೂವಿನ ಹಿಪ್ಪರಗಿ ಹಾಗೂ ದೇವರ ಹಿಪ್ಪರಗಿ ಆಸ್ಪತ್ರೆಗಳಲ್ಲಿ ಪ್ರತಿ ತಿಂಗಳು 50 ರಿಂದ 75 ಹೆರಿಗೆಗಳು ಆಗುತ್ತಿದ್ದು, ಇಲ್ಲಿ ತಾಯಿ ಮತ್ತು ಮಕ್ಕಳಿಗೆ ಪ್ರತ್ಯೇಕ ಆಸ್ಪತ್ರೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಬಾಣಂತಿಯರಿಗೆ ಹಾಗೂ ಹಸುಗೂಸುಗಳಿಗೆ ಆಗುವ ಅನಾನುಕೂಲವನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇ) ದೇವರ ಹಿಪ್ಪರಗಿ ಹಾಗೂ ಹೂವಿನ ಹಿಪ್ಪರಗಿಯಲ್ಲಿ ಪ್ರತ್ಯೇಕ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಿಸಲು ಸ್ಥಳಾವಕಾಶ ಲಭ್ಯವಿದ್ದು, ಮುಂದಿನ ದಿನಗಳಲ್ಲಿ ಆಸ್ಪತ್ರೆ ನಿರ್ಮಿಸಲು ಸರ್ಕಾರ ಚಿಂತಿಸಿದೆಯೇ; ಹಾಗಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) ಈ) ಮಹಿಳೆಯರು ಹಾಗೂ ಮಕ್ಕಳ ಹಿತದೃಷ್ಟಿಯಿಂದ ದೇವರ ಹಿಪ್ಪರಗಿ ಹಾಗೂ ಹೂವಿನ ಹಿಪ್ಪರಗಿಯಲ್ಲಿ ತಾಯಿ ಮತ್ತು ಮಕ್ಕಳ (MCH Hospital) ಆಸ್ಪತ್ರೆಯನ್ನು ಯಾವಾಗ ನಿರ್ಮಿಸಲಾಗುವುದು; ಇದಕ್ಕೆ ಬೇಕಾಗುವ ಕಾಲಾವಕಾಶ ಎಷ್ಟು?

----

**ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು.**

*18 Mr. RIZWAN ARSHAD (Shivajinagar (162)):

ಮಾನ್ಯ Minister for Health & Family Welfare Department excluding Medical Educationದಿನಾಂಕ ಅ) ಮಂಗಳೂರು ನಗರದ ಸೂರತ್ಕಲ್ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು; ಇದಕ್ಕೆ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

----

**ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣ**

*19 Mr. RIZWAN ARSHAD (Shivajinagar (162)):

ಮಾನ್ಯ Minister for Health & Family Welfare Department excluding Medical Educationದಿನಾಂಕ ಅ) ಮಂಡ್ಯ ವಿಧಾನಸಭಾ ಕ್ಷೇತ್ರದ ಗುತ್ತಲು ಬಡಾವಣೆ ಮತ್ತು ಶಂಕರಮಠ ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸ್ವಂತ ಕಟ್ಟಡಗಳಿಲ್ಲದೆ ಶಾಲಾ ಕೊಠಡಿಗಳಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) ಇ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸ್ವಂತ ಕಟ್ಟಡವನ್ನು ಯಾವಾಗ ಮಂಜೂರು ಮಾಡಲಾಗುವುದು? (ಸಂಪೂರ್ಣ ವಿವರ ನೀಡುವುದು)

----

**ಆಂಗ್ಲ ಭಾಷೆ ಭೋಧಕರ ಹುದ್ದೆ ಭರ್ತಿ**

*20 Mr. RIZWAN ARSHAD (Shivajinagar (162)):

ಮಾನ್ಯ Minister for Primary and Secondary Education ದಿನಾಂಕ ಅ) ಹೊಳೆನರಸೀಪುರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಂಗ್ಲ ಭಾಷಾ ಬೋಧಕರ ಹುದ್ದೆಗಳು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಆಂಗ್ಲ ಭಾಷೆಯ ಬೋಧಕರ ಹುದ್ದೆಗಳು ಖಾಲಿ ಇರುವುದರಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಇತರೆ ವಿಷಯಗಳಲ್ಲಿ ಹೆಚ್ಚಿನ ಅಂಕಗಳಿಸಿದರೂ ಸಹ ಆಂಗ್ಲ ಭಾಷೆಯಲ್ಲಿ ಕಡಿಮೆ ಅಂಕ ಗಳಿಸಿ ಅನುತ್ತೀರ್ಣರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅ) ಬಂದಿದ್ದಲ್ಲಿ, ಖಾಲಿ ಇರುವ ಆಂಗ್ಲ ಭಾಷಾ ಬೋಧಕರ ಹುದ್ದೆಗಳನ್ನು ಮಂಜೂರು ಮಾಡಿ, ಭರ್ತಿ ಮಾಡಲು ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ಮಾಹಿತಿ ನೀಡುವುದು)

----

**ರೈತರ ಜಮೀನು ಖರೀದಿ**

*21 Mr. RIZWAN ARSHAD (Shivajinagar (162)):

ಮಾನ್ಯ Minister for Forest, Ecology & Environmental ದಿನಾಂಕ ಅ) ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕಾಡಿನ ಅಂಚಿನಲ್ಲಿರುವ ಗ್ರಾಮಗಳೆಷ್ಟು; (ವಿವರ ನೀಡುವುದು)

ಆ) ಸದರಿ ಕಾಡಿನ ಅಂಚಿನಲ್ಲಿರುವ ಗ್ರಾಮಗಳ ರೈತರುಗಳು ತಮ್ಮ ಜಮೀನುಗಳನ್ನು ಅರಣ್ಯ ಇಲಾಖೆಗೆ ಮಾರಾಟ ಮಾಡಲು ಒಪ್ಪಿಗೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇ) ಬಂದಿದ್ದಲ್ಲಿ, ಸದರಿ ಜಮೀನನ್ನು ಖರೀದಿಸಲು ಅರಣ್ಯ ಇಲಾಖೆಯ ಮಾನದಂಡಗಳೇನು; ಸದರಿ ಜಮೀನು ಖರೀದಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

----

**ಮರ ಕಟಾವು**

***22** **Mr. RIZWAN ARSHAD (Shivajinagar (162)):**

ಮಾನ್ಯ **Minister for Forest, Ecology & Environmental** ದಿನಾಂಕ ಅ) ರಾಜ್ಯದಲ್ಲಿ ರಸ್ತೆಗಳನ್ನು ಅಭಿವೃದ್ಧಿ ಮಾಡುವಾಗ ಅರಣ್ಯ ಇಲಾಖೆಯ ಮರಗಳನ್ನು ಕಡಿಯಲು ಅನುಮತಿ ನೀಡದೇ ಇರುವುದರಿಂದ ರಸ್ತೆಗಳ ಅಭಿವೃದ್ಧಿ ತ್ವರಿತವಾಗಿ ಆಗದೇ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಆ) ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು) ಇ) ಮಾಲೂರು ವಿಧಾನಸಭಾ ಕ್ಷೇತ್ರದಲ್ಲಿ ರಸ್ತೆ ಅಗಲೀಕರಣ ಮಾಡಲು ಅರಣ್ಯ ಇಲಾಖೆಯ ಮರಗಳಿಗೆ ಹಣ ಪಾವತಿ ಮಾಡಿದ್ದರೂ ಸಹ, ಮರಗಳನ್ನು ಕಡಿಯದ ರಸ್ತೆ ಅಭಿವೃದ್ಧಿ ಕಾರ್ಯವು ಕುಂಠಿತವಾಗಿದ್ದು, ಈ ಸಮಸ್ಯೆಯನ್ನು ಯಾವ ಕಾಲಮಿತಿಯಲ್ಲಿ ಬಗೆಹರಿಸಲಾಗುವುದು; (ವಿವರ ಒದಗಿಸುವುದು)

----

**ಜನಜಾನುವಾರುಗಳ ಪ್ರಾಣಹಾನಿ**

***23** **Mr. RIZWAN ARSHAD (Shivajinagar (162)):**

ಮಾನ್ಯ **Minister for Forest, Ecology & Environmental** ದಿನಾಂಕ ಅ) ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು, ಹೊಳೆನರಸೀಪುರ ತಾಲ್ಲೂಕು ಮತ್ತು ಅರಸೀಕೆರೆ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಚಿರತೆಗಳ ಹಾವಳಿಯಿಂದಾಗಿ ಜನಜಾನುವಾರುಗಳ ಪ್ರಾಣಹಾನಿಯಾಗುತ್ತಿರುವುದು ಸರ್ಕಾರದ ಗಮನದಲ್ಲಿ ಇದೆಯೇ; (ಸಂಪೂರ್ಣ ಮಾಹಿತಿ ನೀಡುವುದು) ಆ) ಹಾಗಿದ್ದಲ್ಲಿ ಚಿರತೆಗಳಿಂದ ಆಗಿರುವ ತೊಂದರೆಗಳಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) ಇ) ಚಿರತೆಗಳ ಹಾವಳಿಯಿಂದಾಗಿ ಪ್ರಾಣ ಕಳೆದುಕೊಂಡ ಮನುಷ್ಯರಿಗೆ ಮತ್ತು ಸಾಕುಪ್ರಾಣಿಗಳಿಗೆ ಪರಿಹಾರವನ್ನು ಘೋಷಣೆ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)

----

**ಶಾಲಾ ಕಟ್ಟಡ ನಿರ್ಮಾಣ/ದುರಸ್ತಿಗೆ ಅನುದಾನ ಬಿಡುಗಡೆ**

***24** **Mr. RIZWAN ARSHAD (Shivajinagar (162)):**

ಮಾನ್ಯ **Minister for Primary and Secondary Education** ದಿನಾಂಕ ಅ) ನಾಗಾಠಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಒಟ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಎಷ್ಟು; ಇವುಗಳಲ್ಲಿ ವಿದ್ಯಾರ್ಥಿಗಳಿಲ್ಲದೆ ಮುಚ್ಚಿರುವ ಶಾಲೆಗಳು ಎಷ್ಟು; ಆ) ಈ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಶಿಕ್ಷಕರನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು; ಇ) ನಾಗಾಠಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಶಿಥಿಲಗೊಂಡ ಸರ್ಕಾರಿ

ಶಾಲೆಗಳೆಷ್ಟು; ಸದರಿ ಶಾಲೆಗಳನ್ನು ಹೊಸದಾಗಿ ನಿರ್ಮಿಸಲು/ದುರಸ್ತಿಗೊಳಿಸಲು ಕಳೆದ 3 ವರ್ಷಗಳಲ್ಲಿ ಬಿಡುಗಡೆ ಮಾಡಿದ ಹಣವೆಷ್ಟು? (ಸಂಪೂರ್ಣ ವಿವರ ನೀಡುವುದು)

----